೨                                                                                    ೨-330-②

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ: ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಹಾಗೂ ಕೆ.ಟಿ. ಶ್ರೀಕಂಠೇಗೌಡ ರವರು ನಿಯಮ 330 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ

*ವಿಷಯ:-* "ಸರ್ಕಾರದ ವಿವಿಧ ಇಲಾಖೆಯಡಿಯಲ್ಲಿ ವೇತನಾನುದಾನಕ್ಕೆ ಒಳಪಡಿಸಲು ಮತ್ತು ಖಾಲಿ ಹುದ್ದೆಗಳನ್ನು ತುಂಬಲು ಸಾಕಷ್ಟು ಪ್ರಸ್ತಾವನೆಗಳು ಸ್ವೀಕೃತವಾಗಿರುತ್ತವೆ. ಒಂದೊಂದು ಪ್ರಸ್ತಾವನೆಯೂ ಒಂದು ಕುಟುಂಬದ ಜೀವನವನ್ನು ಒಳಗೊಂಡಿರುತ್ತದೆ. ಇಂತಹ ಪ್ರಸ್ತಾವನೆಗಳನ್ನು ಅನುದಾನಕ್ಕೆ ಒಳಪಡಿಸುವ ಸಂದರ್ಭದಲ್ಲಿ ಸರ್ಕಾರದ ಸಂಖ್ಯೆ:ಆಇ/157/ವೆಚ್ಚ-8/2020, ದಿನಾಂಕ:10.06.2020 ರಂತೆ ಆರ್ಥಿಕ ಇಲಾಖೆಯಿಂದ ಸುತ್ತೋಲೆಯನ್ನು ಹೊರಡಿಸಿ ಈ ಪ್ರಸ್ತಾವನೆಗಳನ್ನು ವಿಲೆ ಇಡಲಾಗಿರುತ್ತದೆ. ಈ ಆರ್ಥಿಕ ಇಲಾಖೆಯ ಸುತ್ತೋಲೆಯಿಂದ ಸಾವಿರಾರು ಕುಟುಬಂಗಳು ಬೀದಿಗೆ ಬೀಳುವ ಪರಿಸ್ಥಿತಿಗೆ ಬಂದಿರುತ್ತವೆ. ಇದರ ಸಂಬಂಧ ಫ್ರೀಡಂ ಪಾರ್ಕ್‌ನಲ್ಲಿ ಧರಣಿಯನ್ನು ಕೂಡಾ ನಡೆಸಿರುತ್ತಾರೆ. ಆದ್ದರಿಂದ ಆರ್ಥಿಕ ಇಲಾಖೆಯ "ಆರ್ಥಿಕ ಮಿತವ್ಯಯ" ಸುತ್ತೋಲೆಯನ್ನು ಹಿಂಪಡೆದು ಎಲ್ಲಾ ಪ್ರಸ್ತಾವನೆಗಳನ್ನು ಅನುದಾನಕ್ಕೆ ಒಳಪಡಿಸಿ ಅನುಕೂಲ ಮಾಡಿಕೊಡುವ ಬಗ್ಗೆ ಸದನದಲ್ಲಿ ಪ್ರಸ್ತಾಪ ಬಯಸುತ್ತೇನೆ."

*ಉತ್ತರ:-* ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ ಹಾಗೂ ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅವಶ್ಯಕತೆ ಇರುವುದರಿಂದ ಆರ್ಥಿಕ ಮಿತವ್ಯಯದ ಆದೇಶವನ್ನು ತಕ್ಷಣ ಹಿಂಪಡೆಯುವುದು ಕಷ್ಟಸಾಧ್ಯವಾಗಿರುತ್ತದೆ. ಮುಂದಿನ ದಿನಗಳಲ್ಲಿ ಆರ್ಥಿಕ ಸಂಪನ್ಮೂಲವನ್ನು ಆಧರಿಸಿ ಈ ಆದೇಶವನ್ನು ಹಂತ ಹಂತವಾಗಿ ಹಿಂಪಡೆಯುವ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಆಇ 11 ವೆಚ್ಚ-8/2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ